## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 390 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 16.02.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗದಗ, ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಿಗೆ ಕಳೆದ 3 ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಹೊಸದಾಗಿ ಮದ್ಯದಂಗಡಿಗಳಿಗೆ ಪರವಾನಗಿ ನೀಡಲಾಗಿದೆಯೇ; | ಗದಗ, ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಪರವಾನಗಿ ನೀಡಲಾದ ಸನ್ನದುಗಳ ವಿವರ ಕೆಳಕಂಡಂತಿದೆ. |

| ಕ್ರ ಸಂ | ವರ್ಷ | ಜಿಲ್ಲೆ | ಮಂಜೂರಾದ ಸನ್ನದುಗಳ ಸಂಖ್ಯೆ | | | | |
|---|---|---|---|---|---|---|---|
| | | | ಸಿಎಲ್-4 | ಸಿಎಲ್-6ಎ | ಸಿಎಲ್-7 | ಸಿಎಲ್-11ಸಿ | ಒಟ್ಟು |
| 1. | 2019-20 | ಗದಗ | 0 | 0 | 5 | 0 | 5 |
| | 2020-21 | | 0 | 0 | 2 | 0 | 2 |
| | 2021-22 | | 0 | 0 | 3 | 0 | 3 |
| 2. | 2019-20 | ಹಾವೇರಿ | 0 | 0 | 2 | 2 | 4 |
| | 2020-21 | | 0 | 0 | 3 | 3 | 6 |
| | 2021-22 | | 0 | 0 | 2 | 1 | 3 |
| 3. | 2019-20 | ಧಾರವಾಡ | 1 | 0 | 1 | 1 | 3 |
| | 2020-21 | | 0 | 0 | 2 | 2 | 4 |
| | 2021-22 | | 0 | 1 | 3 | 0 | 4 |
| ಒಟ್ಟು | | | 1 | 1 | 23 | 9 | 34 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಹೊಸ ಮದ್ಯದಂಗಡಿಗಳಿಗೆ ಪರವಾನಗಿ ನೀಡಲು ಅನುಸರಿಸುತ್ತಿರುವ | 1992ನೇ ಸಾಲಿನಿಂದ ಹೊಸದಾಗಿ ಸಿಎಲ್-2 ಮತ್ತು ಸಿಎಲ್-9 ಸನ್ನದನ್ನು ನೀಡಲು ನಿರ್ಬಂಧವಿರುವುದರಿಂದ ಅಬಕಾರಿ ಇಲಾಖೆಯಿಂದ ಯಾವುದೇ ಹೊಸ ಸಿಎಲ್-2 ಮತ್ತು |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 16/02/2023 10:29 AM

| | | |
|---|---|---|
| | ಮಾನದಂಡಗಳೇನು; | ಸಿಎಲ್-9 ಸನ್ನದಿಗೆ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಸಿಎಲ್-4, ಸಿಎಲ್-6ಎ, ಸಿಎಲ್-7, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು ಫಾರ್ಮ್ ಸಿಎಲ್-18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3(11-ಸಿ), 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಸ್ಥಳೀಯ ಸಂಸ್ಥೆಗಳು, ಹಾಗೂ ಪತ್ರಾಂಕಿತ ಅಧಿಕಾರಿಗಳ ಕೇಂದ್ರ/ರಾಜ್ಯ ಸರ್ಕಾರಿ ಕಛೇರಿಗಳು ಇರುವಂತಿಲ್ಲ. ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164-12166/2016ರ ದಿನಾಂಕ:31-03-2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 16/02/2023 10:29 AM

| | | |
|---|---|---|
| | | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ: 11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯತಿ / ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್–6ಎ ಮತ್ತು ಸಿಎಲ್–7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್–7(ಎ) ಸನ್ನದುಗಳಿಗೂ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ. |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 16/02/2023 10:29 AM

| | | |
|---|---|---|
| ಇ) | ಸರ್ಕಾರ ನಿಗದಿಪಡಿಸಿರುವ ಮಾನದಂಡಗಳನ್ನು ಅನುಸರಿಸದಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರ ನಿಗದಿಪಡಿಸಿರುವ ಮಾನದಂಡಗಳನ್ನು ಅನುಸರಿಸದಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಸ್ವೀಕೃತವಾದಲ್ಲಿ ಅವುಗಳನ್ನು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5(1), ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968ರ ನಿಯಮ 3 ಮತ್ತು 5 ರಡಿಯಲ್ಲಿ ಹಾಗೂ ಸರ್ಕಾರ ಹೊರಡಿಸುವ ಆದೇಶ ಹಾಗೂ ಸುತ್ತೋಲೆಗಳನ್ವಯ ನಿಯಮಾನುಸಾರ ಪರಿಶೀಲಿಸಿ ದೂರುದಾರರಿಗೆ ಹಿಂಬರಹ ನೀಡಲು ಸಂಬಂಧಪಟ್ಟ ಜಿಲ್ಲೆಯ ಅಬಕಾರಿ ಉಪ ಆಯುಕ್ತರು ಕ್ರಮವಹಿಸುತ್ತಿರುತ್ತಾರೆ. |

ಆಇ 05 ಇಎಲ್‌ಕ್ಯೂ 2023

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 16/02/2023 10:29 AM